ಆ) ಸಿ.ಎಸ್.ಪುರ ಗ್ರಾಮದಲ್ಲಿ ಬಸ್ ನಿಲ್ದಾಣ ನಿರ್ಮಿಸಲು ರಾಜ್ಯ ಸರ್ಕಾರದ ವಿಶೇಷ ಅಭಿವೃದ್ಧಿ ಯೋಜನೆಯಡಿಯಲ್ಲಿ ರೂ. 90.00 ಲಕ್ಷಗಳು ಮಂಜೂರಾಗಿರುತ್ತದೆ. ಸದರಿ ಕೆಲಸಕ್ಕಾಗಿ ಅಂದಾಜು ಪಟ್ಟಿಯನ್ನು ತಯಾರಿಸಲಾಗಿದ್ದು, ಟೆಂಡರ್ ಮುಖಾಂತರ ಕಾಮಗಾರಿಯನ್ನು ನಿರ್ವಹಿಸಲಾಗುವುದು. ಸದರಿ ಕೆಲಸಕ್ಕಾಗಿ ಶೀಘ್ರದಲ್ಲೇ ಟೆಂಡರ್ ಆಹ್ವಾನಿಸಲಾಗುವುದು.

**ಭೋವಿ ಅಭಿವೃದ್ಧಿ ನಿಗಮ ಸ್ಥಾಪನೆ**

**5136 (4233); ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ (ಮಧುಗಿರಿ)**

ಅ) 2015–16ನೇ ಸಾಲಿನ ಆಯವ್ಯಯದಲ್ಲಿ (ಪ್ಯಾರ ಸಂಖ್ಯೆ: 204) ಘೋಷಿಸಿದಂತೆ "ಭೋವಿ ಅಭಿವೃದ್ಧಿ ನಿಗಮ" ಸ್ಥಾಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಆ) ಹಾಗಿದ್ದಲ್ಲಿ, ನಿಗಮದ ಪ್ರಾರಂಭಕ್ಕೆ ಬೇಕಾದ ಸಿಬ್ಬಂದಿ, ಕಛೇರಿ ಹಾಗೂ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಇ) ಹಾಗಾದರೆ, ನಿಗಮದ ಕಾರ್ಯ ಚಟುವಟಿಕೆಗಳಿಗೆ ಸರ್ಕಾರ ಈಗಾಗಲೇ ಬಿಡುಗಡೆ ಮಾಡಿರುವ ಅನುದಾನವೆಷ್ಟು (ವಿವರ ನೀಡುವುದು)?

**ಶ್ರೀ ಹೆಚ್. ಆಂಜನೇಯ (ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)**

ಅ) ರಾಜ್ಯದಲ್ಲಿ 2015–16ನೇ ಸಾಲಿನ ಆಯವ್ಯಯದಲ್ಲಿ ಘೋಷಣೆಯಂತೆ ಭೋವಿ ಅಭಿವೃದ್ಧಿ ನಿಗಮ ಸ್ಥಾಪಿಸುವ ಬಗ್ಗೆ ಆರ್ಥಿಕ ಇಲಾಖೆಯ ಅನುಮೋದನೆಗಾಗಿ ಪ್ರಸ್ತಾವನೆ ಸಲ್ಲಿಸಿದ್ದು, ಈಗ ಸಿಬ್ಬಂದಿ ಒದಗಿಸುವ ಬಗ್ಗೆ ಕೆಲವು ಮಾಹಿತಿಗಳನ್ನು ಕೇಳಿರುತ್ತಾರೆ. ಆದ್ದರಿಂದ, ಮಾಹಿತಿಯನ್ನು ಒದಗಿಸಿ ಮುಂದಿನ ಕ್ರಮ ಜರುಗಿಸಲಾಗುವುದು.

ಆ) ಉದ್ಭವಿಸುವುದಿಲ್ಲ.

ಇ) ಪ್ರಸಕ್ತ ಸಾಲಿನಲ್ಲಿ ನಿಗಮದ ಚಟುವಟಿಕೆಗಳಿಗಾಗಿ ರೂ. 25.00 ಕೋಟಿಗಳನ್ನು ಒದಗಿಸಲಾಗಿದೆ.

**ಸಾಂಸ್ಕೃತಿಕ ಭವನಗಳ ನಿರ್ಮಾಣ**

**5137 (4234); ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ (ಮಧುಗಿರಿ)**

ಅ) ಕಳೆದ ಮೂರು ವರ್ಷಗಳಲ್ಲಿ ತುಮಕೂರು ಜಿಲ್ಲೆಯಲ್ಲಿ ಸಾಂಸ್ಕೃತಿಕ ಭವನಗಳ ನಿರ್ಮಾಣಕ್ಕೆ ಸರ್ಕಾರ ಬಿಡುಗಡೆ ಮಾಡಿರುವ ಅನುದಾನ ಎಷ್ಟು? (ತಾಲೂಕುವಾರು ವಿವರ ನೀಡುವುದು)

ಆ) ಹಾಗಾದರೆ, ಬಿಡುಗಡೆಯಾಗಿರುವ ಹಣದಲ್ಲಿ ಕೈಗೊಂಡ ಕಾಮಗಾರಿಗಳೆಷ್ಟು? (ಪೂರ್ಣಗೊಂಡ ಹಾಗೂ ಅಪೂರ್ಣಗೊಂಡ ಬಗ್ಗೆ ತಾಲೂಕುವಾರು ವಿವರ ನೀಡುವುದು)

**ಶ್ರೀಮತಿ ಉಮಾಶ್ರೀ (ಮಾನ್ಯ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲ ಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)**

ಅ) 2012–13

| ಕ್ರ. ಸಂ | ತಾಲೂಕುಗಳ ವಿವರ | ಬಿಡುಗಡೆ ಅನುದಾನ |
|---|---|---|
| 01. | ತುಮಕೂರು | ರೂ. 20.00 |
| 02. | ಪಾವಗಡ | ರೂ. 10.00 |
| 03. | ತಿಪಟೂರು | ರೂ. 15.00 |
| 04. | ತುರುವೆಕೆರೆ | ರೂ. 15.00 |

2013–14ನೇ ಸಾಲಿನಲ್ಲಿ ಅನುದಾನ ಬಿಡುಗಡೆಯಾಗಿರುವುದಿಲ್ಲ

2014–15ನೇ ಸಾಲಿನಲ್ಲಿ ಅನುದಾನ ಬಿಡುಗಡೆಯಾಗಿರುವುದಿಲ್ಲ